ಓ.ಎಸ್. 71/2025,                    ಪಿ.ಡಬ್ಲ್ಯೂ1        ಹೆಸರುಃ ಜಗದೀಶ್ ಚಂದ್

**ದಿಃ17-02-2026 ರಂದು ಸಾಕ್ಷಿದಾರರು ಹಾಜರಿದ್ದು, ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ ವಾದಿಯ ಪರ ಶ್ರೀ ಜಿ.ಇ.ಆರ್. ವಕೀಲರಿಂದಃ**

ನಾನು ನನ್ನ ಪ್ರಮಾಣ ಪತ್ರಿಕೆಯನ್ನು ಸಲ್ಲಿಸಿರುತ್ತೇನೆ. ಇದರಲ್ಲಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತದೆ. ಪ್ರಮಾಣ ಪತ್ರದಲ್ಲಿ ಇರುವ ಸಹಿಗಳು ನನ್ನದೇ ಆಗಿರುತ್ತದೆ.

ಪ್ರತಿವಾದಿಯು ನಮ್ಮ ಬ್ಯಾಂಕಿಗೆ ಸಾಲವನ್ನು ಪಡೆಯುವ ಸಲುವಾಗಿ ನೀಡಿದಂತಹ ದಿನಾಂಕಃ15.06.2017 ರ ಸಾಲದ ಅರ್ಜಿಯನ್ನು ಹಾಜರುಪಡಿಸಿದ್ದು ನಿಪಿ-1 ಎಂದು ಗುರುತಿಸಲಾಯಿತು.

ಪ್ರತಿವಾದಿಯು ನಮ್ಮ ಬ್ಯಾಂಕಿಗೆ ಸಾಲವನ್ನು ಪಡೆಯುವ ಕುರಿತು ನೀಡಿದ ಅರ್ಜಿಯ ಕುರಿತಾಗಿ ಸಾಲವನ್ನು ಮಂಜೂರಾತಿ ಮಾಡಿದ ದಾಖಲಾತಿಯನ್ನು ಹಾಜರುಪಡಿಸಿದ್ದು ಅದನ್ನು  ನಿಪಿ-2 ಎಂದು ಗುರುತಿಸಲಾಯಿತು.

ಪ್ರತಿವಾದಿ ನಮ್ಮ ಬ್ಯಾಂಕಿನಿಂದ ಸಾಲವನ್ನು ಪಡೆದುಕೊಳ್ಳುವ ಕಾಲಕ್ಕೆ ಜಾರಿಮಾಡಿದಂತಹ ಸಾಲದ ಕರಾರು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.3 ಎಂದು ಗುರುತಿಸಲಾಯಿತು.

ಪ್ರತಿವಾದಿಯು ನಮ್ಮ ಬ್ಯಾಂಕಿನಿಂದ ಪಡೆದಂತಹ ಸಾಲವನ್ನು ಮರುಪಾವತಿಮಾಡುವ ಬಗ್ಗೆ ಜಾರಿ ಮಾಡಿಕೊಟ್ಟಂತಹ 3 ಸಾಲದ ನವೀಕರಣದ ಕುರಿತಾದ ದಾಖಲಾತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ರಿಂದ 6 ಎಂದು ಗುರುತಿಸಲಾಯಿತು.

ನಮ್ಮ ಬ್ಯಾಂಕಿನವರು ಪ್ರತಿವಾದಿಗೆ ನಮ್ಮ ವಕೀಲರ ಮೂಲಕ ನೀಡಿರುವಂತಹ ಕಾನೂನು ತಿಳುವಳಿಕೆ ನೋಟೀಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ-7 ಎಂದು ಗುರುತಿಸಲಾಯಿತು.  ಅಂಚೆ ಸ್ವೀಕೃತಿ ಹಿಂಬರಹವನ್ನು ಹಾಜರುಪಡಿಸಿದ್ದು ನಿಪಿ.8 ಎಂದು ಗುರುತಿಸಲಾಯಿತು.

ಪ್ರತಿವಾದಿಗೆ ಸಂಬಂಧಿಸಿದ ಸಾಲದ ಎಕ್ಸ್‌ಟ್ರಾಕ್ಟ್‌ನ್ನು ಹಾಜರುಪಡಿಸಿದ್ದು ನಿಪಿ-9 ಎಂದು ಗುರುತಿಸಲಾಯಿತು.

**ಪಾಟೀ ಸವಾಲಿಗಾಗಿ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ